ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಪದವಿ ಕಾಲೇಜುಗಳ ಅತಿಥಿ ಉಪನ್ಯಾಸಕರಿಗೆ ಕೋವಿಡ್-19 ರಿಂದಾಗಿ ಕಾಲೇಜುಗಳು ಪ್ರಾರಂಭವಾಗುವುದು ವಿಳಂಬವಾಗಿರುವುದಕ್ಕೆ ಪ್ರೋತ್ಸಾಹ/ಪರಿಹಾರ ಧನ ನೀಡುವ ಬಗ್ಗೆ

ಶ್ರೀ ನಿರಾಣಿ ಹಣವಂತ್ ರುದ್ರಪ್ಪ (ಪದವೀಧರರ ಕ್ಷೇತ್ರ):-

808 (898) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ಪದವಿ ಕಾಲೇಜುಗಳು ಪ್ರಾರಂಭವಾಗುವುದು ವಿಳಂಬವಾಗಿರುವುದರಿಂದ ಅತಿಥಿ ಉಪನ್ಯಾಸಕರಿಗೆ ವೇತನವಿಲ್ಲದೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸದರಿ ಅತಿಥಿ ಉಪನ್ಯಾಸಕರಿಗೆ ವಿಶೇಷ ಪ್ರೋತ್ಸಾಹ ಧನವನ್ನು ನೀಡಲು ಸರ್ಕಾರ ಯೋಜನೆ ಹಮ್ಮಿಕೊಳ್ಳುವುದೇ ;

(ಇ) ಎಷ್ಟು ಪ್ರೋತ್ಸಾಹ ಧನವನ್ನು ನೀಡಲು ಕ್ರಮ ಕೈಗೊಳ್ಳಲಾಗುವುದು;

(ಈ) ಪದವಿ ಕಾಲೇಜುಗಳ ಪ್ರಾರಂಭದ ನಂತರವು ಸಹ

ಕೋವಿಡ್-19 ರಿಂದಾಗಿ ದಿನನಿತ್ಯ ಜೀವನ ನಡೆಸುವುದು ಕಷ್ಟವಾಗಿರುವುದರಿಂದ ಅತಿಥಿ ಉಪನ್ಯಾಸಕರಿಗೆ ನೀಡುತ್ತಿರುವ ಗೌರವಧನವನ್ನು ಹೆಚ್ಚಿಸಲಾಗುವುದೇ ;

(ಉ) ಹಾಗಾದಲ್ಲಿ, ಯಾವ ಪ್ರಮಾಣದಲ್ಲಿ ಹೆಚ್ಚಿಸಲಾಗುವುದು ?